ಶ್ರೀ ಸಿ.ಎಂ.ಉದಾಸಿ (ಲೋಕೋಪಯೋಗಿ ಸಚಿವರು) :

ಅ) ರಾಮನಗರದಲ್ಲಿ ಜಿಲ್ಲಾ ಸಂಕೀರ್ಣ ಕಟ್ಟಡದ ಅಂದಾಜಿಗೆ ರೂ.3,000.00 ಲಕ್ಷಗಳು ಹಾಗೂ ಕಂದಾಯ ಭವನ, ಪೋಲಿಸ್ ಭವನ ಮತ್ತು ಪಂಚಾಯತ್ ಭವನಗಳ ಕಟ್ಟಡಗಳ ಅಂದಾಜುಗಳಿಗೆ ರೂ.3,300.00 ಲಕ್ಷಗಳು.

ಆ) ಸದರಿ ಭವನಗಳಿಗೆ ನಿರ್ಮಿಸಲು ಇಲ್ಲಿಯವರೆಗೆ ರೂ.4,695.89 ಲಕ್ಷಗಳ ಅನುದಾನ ಬಿಡುಗಡೆ ಮಾಡಲಾಗಿದೆ.

ಇ) ಗುತ್ತಿಗೆ ಕರಾರಿನಂತೆ ಒಟ್ಟು ರೂ.71.17 ಕೋಟಿಗಳ ಅವಶ್ಯಕತೆ ಇದ್ದು, ಅಂದಾಜು ಮೊತ್ತಕ್ಕೆ ಹೋಲಿಸಿದ್ದಲ್ಲಿ ರೂ.8.17 ಕೋಟಿಗಳ ಹೆಚ್ಚುವರಿ ಅನುದಾನ ಬೇಕಿರುತ್ತದೆ.

ಈ) ಪ್ರಗತಿ ಆಧರಿಸಿ ಅನುದಾನ ಬಿಡುಗಡೆಗೊಳಿಸಲಾಗುವುದು.

ಉ) ಹೌದು.

ಊ) ಗುತ್ತಿಗೆ ಕರಾರಿನಂತೆ ಜಿಲ್ಲಾ ಸಂಕೀರ್ಣ ಕಟ್ಟಡವನ್ನು ದಿನಾಂಕ: 30.07.2008ಕ್ಕೆ ಹಾಗೂ ಕಂದಾಯ ಭವನ, ಪೋಲೀಸ್ ಭವನ ಮತ್ತು ಪಂಚಾಯತ್ ಭವನದ ಕಟ್ಟಡಗಳಿಗೆ ದಿನಾಂಕ: 22.07.2008ಕ್ಕೆ ಪೂರ್ಣಗೊಳಿಸಲು ನಿಗದಿಪಡಿಸಲಾಗಿತ್ತು. ಆದರೆ ಹಲವು ಕಾರಣಗಳಿಂದಾಗಿ ಕಾಮಗಾರಿ ವಿಳಂಬವಾಗಿದ್ದು, ಗುತ್ತಿಗೆದಾರರಿಗೆ ದಂಡ ಸಹಿತ ಕಾಲಾವಧಿ ವಿಸ್ತರಿಸಿ ಮೇಲ್ಕಂಡ ಎಲ್ಲಾ ಕಾಮಗಾರಿಗಳನ್ನು 2010 ಜನವರಿ ತಿಂಗಳ ಅಂತ್ಯದೊಳಗೆ ಪೂರ್ಣಗೊಳಿಸಲಾಗುವುದು.

77 **ಶ್ರೀ ರಾಮಲಿಂಗಾರೆಡ್ಡಿ (ಬಿ.ಟಿ.ಎಂ.ಲೇಔಟ್)** : ಮಾನ್ಯ ಮುಖ್ಯಮಂತ್ರಿಯವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಕನ್ನಡ ಭಾಷೆಗೆ ಶಾಸ್ತ್ರೀಯ ಭಾಷೆ ಸ್ಥಾನಮಾನ ಸಂದಿರುವ ಸಂದರ್ಭದಲ್ಲಿ ಕೇಂದ್ರ ಸರ್ಕಾರದ ಹಣಕಾಸಿನ ನೆರವು ಪಡೆದುಕೊಳ್ಳಲಾಗಿದೆಯೇ;

ಆ) ಹಾಗಿದ್ದಲ್ಲಿ, ಕನ್ನಡ ಭಾಷೆಗೆ ಶಾಸ್ತ್ರೀಯ ಭಾಷೆ ಸ್ಥಾನಮಾನ ದೊರೆತ ನಂತರ ಸರ್ಕಾರ ಕೈಗೊಂಡ ಕ್ರಮಗಳೇನು;

ಇ) ಚನ್ನೈ ಉಚ್ಚ ನ್ಯಾಯಾಲಯದಲ್ಲಿ ವ್ಯಕ್ತಿಯೊಬ್ಬರು ಹೂಡಿರುವ ದಾವೆಯನ್ನು ಇತ್ಯರ್ಥಗೊಳಿಸಲು ಸರ್ಕಾರ ಕೈಗೊಂಡ ಕ್ರಮಗಳೇನು;

ಈ) ಸರ್ಕಾರ ಈ ದೆಸೆಯಲ್ಲಿ ಉನ್ನತ ಮಟ್ಟದ ಹಿರಿಯ ಸಾಹಿತಿಗಳ ಸಮಿತಿಯನ್ನು ರಚಿಸಿದೆಯೇ?

ಶ್ರೀ ಬಿ.ಎಸ್. ಯಡಿಯೂರಪ್ಪ (ಮುಖ್ಯಮಂತ್ರಿಯವರು) :

ಅ) – ಇಲ್ಲ –

ಆ) ಸರ್ಕಾರದ ಆದೇಶ ಸಂಖ್ಯೆ:ಕಸಂವಾಪ್ರ 2 ಕೆಒಎಲ್ 2009, ಬೆಂಗಳೂರು ದಿ:13–2–2009ರಲ್ಲಿ ಕನ್ನಡಕ್ಕೆ ಶಾಸ್ತ್ರೀಯ ಭಾಷೆ ಸ್ಥಾನಮಾನ ದೊರೆತ ಹಿನ್ನೆಲೆಯಲ್ಲಿ ಕನ್ನಡ ಭಾಷಾ ಸರ್ವಾಂಗೀಣ ಅಭಿವೃದ್ಧಿಗೆ ಅಗತ್ಯವಾದ ಸಲಹೆ–ಸೂಚನೆ ನೀಡಲು ಮತ್ತು ಕಾರ್ಯಕ್ರಮದ ರೂಪುರೇಷೆಗಳನ್ನು ಸಿದ್ಧಪಡಿಸಿ, ಅನುಷ್ಠಾನಗೊಳಿಸಲು ಬೇಕಾದ ಮಾರ್ಗದರ್ಶನ ನೀಡುವುದಕ್ಕಾಗಿ ಮಾನ್ಯ ಮುಖ್ಯಮಂತ್ರಿಗಳ ಅಧ್ಯಕ್ಷತೆಯಲ್ಲಿ ಭಾಷಾ ವಿದ್ವಾಂಸರನ್ನೊಳಗೊಂಡ ಉನ್ನತ ಮಟ್ಟದ ಸಮಿತಿಯನ್ನು ಹಾಗೂ ಕನ್ನಡ, ಸಂಸ್ಕೃತಿ ವಾರ್ತಾ ಇಲಾಖೆಯ ಕಾರ್ಯದರ್ಶಿಗಳ ಅಧ್ಯಕ್ಷತೆಯಲ್ಲಿ ಕಾರ್ಯಕಾರಿ ಸಮಿತಿಯನ್ನು ರಚಿಸಲಾಗಿದೆ.

ದಿನಾಂಕ: 05–09–2009ರಂದು ಸರ್ಕಾರದ ಕಾರ್ಯದರ್ಶಿಗಳು ಕನ್ನಡ ಮತ್ತು ಸಂಸ್ಕೃತಿ ಹಾಗೂ ವಾರ್ತಾ ಇಲಾಖೆ ಇವರ ಅಧ್ಯಕ್ಷತೆಯಲ್ಲಿ ಕನ್ನಡ ಭಾಷಾ ಕಾರ್ಯಕಾರಿ ಸಮಿತಿ ಸಭೆಯನ್ನು ಕರೆಯಲಾಗಿತ್ತು. ಸಭೆಯ ನಿರ್ಣಯದಂತೆ ಕನ್ನಡ ಭಾಷೆಗೆ ಶಾಸ್ತ್ರೀಯ ಭಾಷೆ ಸ್ಥಾನಮಾನ ಸಂದಿರುವ ಸಂದರ್ಭದಲ್ಲಿ ಕೇಂದ್ರ ಸರ್ಕಾರದ ಹಣಕಾಸಿನ ನೆರವು ಪಡೆದುಕೊಳ್ಳುವ ಸಂಬಂಧ ಕ್ರಿಯಾ ಯೋಜನೆ ಸಿದ್ಧಪಡಿಸುವ ಸಲುವಾಗಿ ಮೊದಲು Standing Finance Committee ರಚಿಸಬೇಕಾಗಿರುತ್ತದೆ. ಈ ಬಗ್ಗೆ ರಾಜ್ಯ ಸರ್ಕಾರದಿಂದ ಕೇಂದ್ರ ಸರ್ಕಾರಕ್ಕೆ ಪತ್ರ ಬರೆಯಲಾಗಿದ್ದು ಉತ್ತರವನ್ನು ನಿರೀಕ್ಷಿಸಿದೆ.

ಇ) ಚನ್ನೈ ಉಚ್ಚ ನ್ಯಾಯಾಲಯದಲ್ಲಿ ಶ್ರೀ ಆರ್.ಗಾಂಧಿ, ಎಂಬುವವರು ಹೂಡಿರುವ ರಿಟ್ ಅರ್ಜಿ ಸಂಖ್ಯೆ: 18810/2008 ಹಾಗೂ ವಿಶೇಷ ಅರ್ಜಿ ಸಂಖ್ಯೆ 28334/08 ವಿರುದ್ಧವಾಗಿ ಕನ್ನಡ ಅಭಿವೃದ್ಧಿ ಪ್ರಾಧಿಕಾರದ ವತಿಯಿಂದ ಇಂಪ್ಲಿಡಿಂಗ್ ಅರ್ಜಿಯನ್ನು ಸಲ್ಲಿಸಿದ್ದು, ಸಮಸ್ತ ಕನ್ನಡ ಜನತೆಯ ಪರವಾಗಿ ಕರ್ನಾಟಕ ಸರ್ಕಾರದ ಪರವಾಗಿ ವಾದ ಮಾಡಿ ಕನ್ನಡಕ್ಕೆ ಶಾಸ್ತ್ರೀಯ ಸ್ಥಾನಮಾನಕ್ಕೆ ಅಡ್ಡಿಯಾಗಿರುವ/ತಡೆಯಾಗಿರುವ

ಮೇಲ್ಕಂಡ ಅರ್ಜಿಯನ್ನು ಖುಲಾಸೆ ಮಾಡಿ ಕನ್ನಡಕ್ಕೆ ಶಾಸ್ತ್ರೀಯ ಸ್ಥಾನಮಾನವನ್ನು ಕೇಂದ್ರದಿಂದ ಪಡೆದುಕೊಳ್ಳಲು ಚನ್ನೈ ಉಚ್ಚ ನ್ಯಾಯಾಲಯದಲ್ಲಿ ವಾದಿಸಲು ಸೂಕ್ತ ಕ್ರಮ ಕೈಗೊಳ್ಳಬೇಕೆಂದು ಅಡ್ವೊಕೇಟ್ ಜನರಲ್. ಕರ್ನಾಟಕ ಉಚ್ಚ ನ್ಯಾಯಾಲಯ, ಇವರನ್ನು ಕೋರಲಾಗಿದೆ. ಅಲ್ಲದೆ ಶ್ರೀ ಜಿ.ಕಾರ್ತಿಕೇಯನ್, ವಕೀಲರನ್ನು ಚನ್ನೈ ಉಚ್ಚ ನ್ಯಾಯಾಲಯದಲ್ಲಿ ನಮ್ಮ ರಾಜ್ಯದ ಪರವಾಗಿ ವಾದ ಮಾಡಲು ನೇಮಿಸಲಾಗಿದೆ.

ಈ) ಹೌದು.

650 ಡಾ॥ ಬಗಲಿ ಸಾರ್ವಭೌಮ ಸಾತಗೌಡ (ಇಂಡಿ) : ಮಾನ್ಯ ಮುಖ್ಯಮಂತ್ರಿಯವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಪ್ರಾಚ್ಯವಸ್ತು ಮತ್ತು ಸಂಗ್ರಹಾಲಯಗಳ ಇಲಾಖೆಯಲ್ಲಿ 2004 ರಿಂದ ವರ್ಷವಾರು ಎಷ್ಟು ಜನ ಭದ್ರತಾ ಸಿಬ್ಬಂದಿಯನ್ನು ನೇಮಿಸಿಕೊಳ್ಳಲಾಗಿದೆ?

ಆ) ಸದರಿ ಸಿಬ್ಬಂದಿಯನ್ನು ನೇಮಿಸಿಕೊಳ್ಳಲು ಸರ್ಕಾರದ ಅನುಮತಿಯನ್ನು ಪಡೆದುಕೊಳ್ಳಲಾಗಿದೆಯೇ ಮತ್ತು ಟೆಂಡರ್ ಕರೆಯಲಾಗಿದೆಯೇ?

ಇ) ಸರ್ಕಾರ ಯಾವಾಗ ಅನುಮತಿಯನ್ನು ನೀಡಲಾಯಿತು? ಅದರ ಪ್ರತಿಯನ್ನು ಒದಗಿಸುವುದು;

ಶ್ರೀ ಬಿ.ಎಸ್.ಯಡಿಯೂರಪ್ಪ (ಮುಖ್ಯಮಂತ್ರಿಯವರು) :

ಅ) ಪ್ರಾಚ್ಯವಸ್ತು ಮತ್ತು ಸಂಗ್ರಹಾಲಯ ಇಲಾಖೆಯಲ್ಲಿ 2004 ರಿಂದ ವರ್ಷವಾರು ನೇಮಕ ಮಾಡಿಕೊಂಡಿರುವ ಭದ್ರತಾ ಸಿಬ್ಬಂದಿಯ ವಿವರ ಕೆಳಕಂಡಂತಿವೆ.

2004	–	14 ಜನ
2005	–	30 ಜನ
2006	–	47 ಜನ
2007	–	66 ಜನ
2008	–	71 ಜನ